## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | (466) 314 |
| ಉತ್ತರಿಸುವ ದಿನಾಂಕ | 23-09-2020 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯಾದ್ಯಂತ ರೈತರಿಗೆ ಇ.ಸಿ ಬೋಜಾ ಫಾರಂಗಳನ್ನು ಯಾವ ಕೇಂದ್ರಗಳಲ್ಲಿ ನೀಡಲಾಗುತ್ತಿದೆ; | ರಾಜ್ಯದ ಎಲ್ಲಾ ಉಪನೋಂದಣಿ ಕಛೇರಿಗಳಲ್ಲಿ ಸಂಬಂಧಪಟ್ಟ ತಾಲ್ಲೂಕಿನ ಸ್ವತ್ತುಗಳಿಗೆ ಸಂಬಂಧಿಸಿದ ಋಣಭಾರ ಪ್ರಮಾಣ ಪತ್ರಗಳನ್ನು ಆಯಾ ಉಪನೋಂದಣಿ ಕಛೇರಿಗಳಲ್ಲಿ ನೀಡಲಾಗುತ್ತಿದೆ ಹಾಗೂ ಇಲಾಖೆಯ ಕಾವೇರಿ ಆನ್‌ಲೈನ್ ಸೇವೆಗಳ ಮೂಲಕ ಸಾರ್ವಜನಿಕರು ಋಣಭಾರ ಪ್ರಮಾಣ ಪತ್ರಗಳನ್ನು ಆನ್‌ಲೈನ್ ಮೂಲಕ ಪಡೆಯಬಹುದಾಗಿದೆ. |
| ಆ | ರೈತರಿಗೆ ಸಕಾಲಕ್ಕೆ ಇ.ಸಿ ಬೋಜಾ ಫಾರಂಗಳು ದೊರಕದೆ ಬ್ಯಾಂಕ್‌ಗಳಲ್ಲಿ ಸಕಾಲಕ್ಕೆ ಸಾಲ ಸಿಗದೇ ರೈತರು ಅನುಭವಿಸುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೋವಿಡ್-19 ವೈರಸ್ ಹರಡುವಿಕೆಯ ಹಿನ್ನೆಲೆಯಲ್ಲಿ ಸಾರ್ವಜನಿಕರ ಹಿತದೃಷ್ಟಿಯಿಂದ ಸಾರ್ವಜನಿಕರು/ರೈತರು ಉಪನೋಂದಣಿ ಕಛೇರಿಗಳಿಗೆ ಖುದ್ದಾಗಿ ಹಾಜರಾಗಿ ಋಣಭಾರ ಪ್ರಮಾಣ ಪತ್ರಗಳನ್ನು ಪಡೆಯಲು ಅರ್ಜಿ ಸಲ್ಲಿಸುವುದನ್ನು ಮತ್ತು ಋಣಭಾರ ಪ್ರಮಾಣ ಪತ್ರಗಳನ್ನು ಪಡೆಯುವುದನ್ನು ತಪ್ಪಿಸಲು ಇಲಾಖೆಯು ಋಣಭಾರ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಕಾವೇರಿ ಆನ್‌ಲೈನ್ ಸೇವೆಗಳ ಮೂಲಕ ಅರ್ಜಿಗಳನ್ನು ಸ್ವೀಕರಿಸಿ, ಋಣಭಾರ ಪ್ರಮಾಣ ಪತ್ರಗಳನ್ನು ಆನ್‌ಲೈನ್ ಮೂಲಕವೇ ಸಾರ್ವಜನಿಕರಿಗೆ ನೀಡುವಂತೆ ಸೂಚಿಸಲಾಗಿರುತ್ತದೆ.<br><br>ಆದರೆ, ಕಾವೇರಿ ಆನ್‌ಲೈನ್ ಸೇವೆಗಳಿಗೆ ಸಂಬಂಧಿಸಿದ ತಂತ್ರಾಂಶದಲ್ಲಿನ ತಾಂತ್ರಿಕ ಕಾರಣಗಳಿಂದ ಋಣಭಾರ ಪ್ರಮಾಣ ಪತ್ರಗಳನ್ನು ಸಕಾಲದಲ್ಲಿ ನೀಡಲು ವಿಳಂಬವಾಗಿರುತ್ತದೆ. ಆದ್ದರಿಂದ, ಋಣಭಾರ ಪ್ರಮಾಣ ಪತ್ರಗಳಿಗೆ ಸಂಬಂಧಿಸಿದ ಅರ್ಜಿಗಳನ್ನು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಸಲ್ಲಿಸಿ ಪಡೆಯುವುದನ್ನು ಹಿಂಪಡೆದು, ಈ ಹಿಂದೆ ಇದ್ದ ಪದ್ಧತಿಯಂತೆ ಆಫ್‌ಲೈನ್ (offline) ಮತ್ತು ಆನ್‌ಲೈನ್ (online) ಮೂಲಕ ಪಡೆಯುವ ಸೌಲಭ್ಯವನ್ನು ಕಲ್ಪಿಸಲಾಗಿದೆ. |

. . . 2

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಪ್ರಸ್ತುತ ಆಫ್‌ಲೈನ್ (offline) ಮತ್ತು ಆನ್‌ಲೈನ್ (online) ಮೂಲಕ ಅರ್ಜಿಗಳನ್ನು ಪಡೆದು, ಋಣಭಾರ ಪ್ರಮಾಣ ಪತ್ರಗಳನ್ನು ಉಪ ನೋಂದಣಾಧಿಕಾರಿಗಳು ಆಫ್‌ಲೈನ್ (offline) ಮತ್ತು ಆನ್‌ಲೈನ್ (online)ನಲ್ಲಿ ನೀಡುತ್ತಿರುವುದರಿಂದ, ಋಣಭಾರ ಪ್ರಮಾಣ ಪತ್ರಗಳನ್ನು ಪಡೆಯುವಲ್ಲಿ ವಿಳಂಬವಾಗುವುದನ್ನು ತಪ್ಪಿಸಲಾಗಿದೆ. |
| ಇ | ರೈತರಿಗೆ ಸಕಾಲಕ್ಕೆ ಇ.ಸಿ ಬೋಜಾ ಫಾರಂಗಳು ದೊರಕುವಂತಾಗಲು ಬ್ಯಾಂಕ್‌ಗಳೇ ಆನ್‌ಲೈನ್‌ನಲ್ಲಿ ಇ.ಸಿ ಬೋಜಾ ಫಾರಂಗಳನ್ನು ಪಡೆದುಕೊಳ್ಳಲು ಅವಕಾಶವಿದೆಯೇ? | ಇಲಾಖೆಯ ಕಾವೇರಿ ಆನ್‌ಲೈನ್ ಸೇವೆಗಳಲ್ಲಿ ಯಾವುದೇ ಸ್ವತ್ತಿಗೆ ಸಂಬಂಧಿಸಿದ ಋಣಭಾರ ಪ್ರಮಾಣ ಪತ್ರಗಳನ್ನು 2004ರ ನಂತರದ ಅವಧಿಗೆ ಬ್ಯಾಂಕುಗಳೇ ಆನ್‌ಲೈನ್ ಸೇವೆಗಳ ಮುಖಾಂತರ ಅರ್ಜಿ ಸಲ್ಲಿಸಿ, ಸದರಿ ಋಣಭಾರ ಪ್ರಮಾಣ ಪತ್ರಗಳನ್ನು ಪಡೆದುಕೊಳ್ಳಲು ಅವಕಾಶವಿರುತ್ತದೆ. |

ಸಂಖ್ಯೆ: ಕಂಇ/158/ಎಂಎಸ್ಎಸ್ಎ/2020

(ಆರ್.ಅಶೋಕ್)
ಕಂದಾಯ ಸಚಿವರು